## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** 2023-24ನೇ ಸಾಲಿಗೆ 74 ಆದರ್ಶ ವಿದ್ಯಾಲಯಗಳಿಗೆ 6ನೇ ತರಗತಿಗೆ ಒಂದು ಹೆಚ್ಚುವರಿ ವಿಭಾಗ ಪ್ರಾರಂಭಿಸಲು ಅನುಮತಿ ನೀಡುವ ಕುರಿತು.

**ಓದಲಾಗಿದೆ:** ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ ಕರ್ನಾಟಕ, ಬೆಂಗಳೂರು ಇವರ ಏಕ ಕಡತ ಸಂಖ್ಯೆ: SSK/AV/AVS/5/2022-JDP, ದಿನಾಂಕ: 28.01.2023.

**ಪ್ರಸ್ತಾವನೆ:**

ಮೇಲೆ ಓದಲಾದ ಪ್ರಸ್ತಾವನೆಯಲ್ಲಿ ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ ಕರ್ನಾಟಕ, ಬೆಂಗಳೂರು ಇವರು ರಾಜ್ಯದ 39 ಆದರ್ಶ ವಿದ್ಯಾಲಯಗಳಲ್ಲಿ ದಾಖಲಾತಿ ಬೇಡಿಕೆ ಹೆಚ್ಚಾಗಿರುವುದರಿಂದ ರಾಜ್ಯದಲ್ಲಿ ಶೈಕ್ಷಣಿಕವಾಗಿ ಹಿಂದುಳಿದ 74 ತಾಲ್ಲೂಕುಗಳಲ್ಲಿ ತಲಾ 1 ರಂತೆ 74 ಆದರ್ಶ ವಿದ್ಯಾಲಯಗಳನ್ನು ಪ್ರಾರಂಭಿಸಿ, 6 ರಿಂದ 8ನೇ ತರಗತಿಗಳನ್ನು ನಡೆಸುತ್ತಿದ್ದು, ಪ್ರತಿ ತರಗತಿಗೆ ವಿದ್ಯಾರ್ಥಿಗಳ ಸಂಖ್ಯೆಯ ಗರಿಷ್ಠ ಮಿತಿಯನ್ನು 80 ಕ್ಕೆ ನಿಗಧಿಪಡಿಸಲಾಗಿದೆ. ಸದರಿ ಆದರ್ಶ ಶಾಲೆಗಳಲ್ಲಿ ಆಂಗ್ಲ ಮಾಧ್ಯಮದಲ್ಲಿ ಶಿಕ್ಷಣ ಬೋಧಿಸಲಾಗುತ್ತಿದ್ದು. 04 ವಿಷಯಗಳು ಎನ್‌ಸಿಇಆರ್‌ಟಿ ಪಠ್ಯಕ್ರಮ (ಪ್ರಥಮಭಾಷೆ-ಇಂಗ್ಲಿಷ್, ತೃತೀಯ ಭಾಷೆ- ಹಿಂದಿ, ಗಣಿತ ಮತ್ತು ವಿಜ್ಞಾನ) ಮತ್ತು 02 ವಿಷಯಗಳು ರಾಜ್ಯ ಪಠ್ಯಕ್ರಮ (ದ್ವಿತೀಯ ಭಾಷೆ- ಕನ್ನಡ ಮತ್ತು ಸಮಾಜ ವಿಜ್ಞಾನ) ವನ್ನು ಅನುಸರಿಸಲಾಗುತ್ತಿದೆ. ಪ್ರಾರಂಭಿಕ 6ನೇ ತರಗತಿಗೆ ಪ್ರವೇಶ ಪರೀಕ್ಷೆಯ ಮುಖಾಂತರ ಪಡೆದ ಅಂಕಗಳು ಮತ್ತು ಕರ್ನಾಟಕ ಮೀಸಲಾತಿಯನ್ವಯ ಅರ್ಹತೆಯ ಅನುಸಾರ ಭರ್ತಿ ಮಾಡಲಾಗುತ್ತಿದೆ.

ಪ್ರಸ್ತುತ, ರಾಜ್ಯದ 39 ಆದರ್ಶ ವಿದ್ಯಾಲಯಗಳಲ್ಲಿ ದಾಖಲಾತಿ ಬೇಡಿಕೆ ಹೆಚ್ಚಾಗಿರುವುದರಿಂದ ಸದರಿ ಶಾಲೆಗಳು ಗ್ರಾಮೀಣ ಪ್ರದೇಶದಲ್ಲಿರುವುದರಿಂದ ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೆ ಹೆಚ್ಚು ಅನುಕೂಲವಾಗುತ್ತದೆ, ಶಾಲೆಯಲ್ಲಿ ಎನ್.ಸಿ.ಇ.ಆರ್.ಟಿ ಪಠ್ಯಕ್ರಮ ಬೋಧನೆಯಿರುವುದರಿಂದ ರಾಷ್ಟ್ರೀಯ ಮಟ್ಟದಲ್ಲಿ ಸ್ಪರ್ಧಾತ್ಮಕ ಪರೀಕ್ಷೆ ತೆಗೆದುಕೊಳ್ಳುವುದಕ್ಕೆ ಅನುಕೂಲವಾಗುತ್ತದೆ. ತಾಲ್ಲೂಕಿನ ಶೈಕ್ಷಣಿಕ ಗುಣಮಟ್ಟವು ಹೆಚ್ಚಾಗುತ್ತದೆ. ವಿದ್ಯಾರ್ಥಿಗಳ ಸರ್ವತೋಮುಖ ಅಭಿವೃದ್ಧಿಗೆ ಅವಕಾಶ ಕಲ್ಪಿಸಲಾಗುತ್ತಿದೆ, ಪ್ರತಿಯೊಂದು ಶಾಲೆಯಲ್ಲಿ 6ನೇ ತರಗತಿಗೆ ಹೆಚ್ಚುವರಿಯಾಗಿ ಒಂದು ವಿಭಾಗವನ್ನು ಪ್ರಾರಂಭಿಸಿದರೆ ಶಾಲೆಯಲ್ಲಿ ಲಭ್ಯವಿರುವ ಕೊಠಡಿಗಳನ್ನೇ ಬಳಸಿಕೊಳ್ಳಲು ಅವಕಾಶ ಇರುತ್ತದೆ. ಶಾಲೆಯಲ್ಲಿ ಹಾಲಿ ಕರ್ತವ್ಯ ನಿರ್ವಹಿಸುತ್ತಿರುವ ಶಿಕ್ಷಕರುನ್ನು ಬಳಸಿಕೊಂಡು ತರಗತಿ ಬೋಧನೆ ಮಾಡಬಹುದಾಗಿದೆ ಇದರಿಂದ ಸರ್ಕಾರಕ್ಕೆ ಆರ್ಥಿಕ ಹೊರೆ ಉಂಟಾಗುವುದಿಲ್ಲ. ಆದ್ದರಿಂದ, ರಾಜ್ಯದ 74 ಆದರ್ಶ ವಿದ್ಯಾಲಯಗಳ ಪ್ರತಿಯೊಂದು ಶಾಲೆಯಲ್ಲಿ 6ನೇ ತರಗತಿಗೆ ಒಂದು ಹೆಚ್ಚುವರಿ ವಿಭಾಗವನ್ನು ತೆರೆಯಲು ಹಾಗೂ ಹೆಚ್ಚುವರಿ ವಿಭಾಗಕ್ಕೆ ಅಗತ್ಯವಿರುವ ಡೆಸ್ಕ್ ಗಳ ಖರೀದಿಗೆ ಪೀಠೋಪಕರಣ ವೆಚ್ಚ ರೂ. 1,50,000/- ಪ್ರತಿ ಶಾಲೆಗೆ ಹಾಗೂ ಪ್ರತಿಯೊಂದು ಆದರ್ಶ ಶಾಲೆಗಳ ವಾರ್ಷಿಕ ನಿರ್ವಹಣೆಗೆ

ವಾರ್ಷಿಕವಾಗಿ ಕನಿಷ್ಠ ರೂ. 5 ಲಕ್ಷ, ಆವರ್ತಕ ವೆಚ್ಚ ರೂ. 16,51,53,792/- ಹಾಗೂ ಅನವರ್ತಕ ವೆಚ್ಚ ರೂ. 5,55,00,000/- ಗಳನ್ನು ಮಂಜೂರು ಮಾಡವಂತೆ ಸರ್ಕಾರವನ್ನು ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಇಪಿ 146 ಪಿಬಿಎಸ್ 2023,**
**ಬೆಂಗಳೂರು, ದಿನಾಂಕ: 14.03.2023.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಆದರ್ಶ ವಿದ್ಯಾಲಯಗಳು ಗ್ರಾಮೀಣ ಪ್ರದೇಶದಲ್ಲಿರುವುದರಿಂದ ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೆ ಹೆಚ್ಚು ಅನುಕೂಲವಾಗುತ್ತದೆ. ಸದರಿ ಶಾಲೆಯಲ್ಲಿ ಎನ್.ಸಿ.ಇ.ಆರ್.ಟಿ ಪಠ್ಯಕ್ರಮ ಬೋಧನೆಯಿರುವುದರಿಂದ, ವಿದ್ಯಾರ್ಥಿಗಳ ಸರ್ವತೋಮುಖ ಅಭಿವೃದ್ಧಿಗೆ ಅವಕಾಶ ಕಲ್ಪಿಸಿದಂತಾಗುವುದರಿಂದ, ಇದರಿಂದಾಗಿ ವಿದ್ಯಾರ್ಥಿಗಳು ರಾಷ್ಟ್ರೀಯ ಮಟ್ಟದಲ್ಲಿ ಸ್ಪರ್ಧಾತ್ಮಕ ಪರೀಕ್ಷೆ ತೆಗೆದುಕೊಳ್ಳುವುದಕ್ಕೆ ಅನುಕೂಲವಾಗುವುದರಿಂದ, ತಾಲ್ಲೂಕಿನ ಶೈಕ್ಷಣಿಕ ಗುಣಮಟ್ಟವು ಹೆಚ್ಚಾಗುವುದರಿಂದ ಅಲ್ಲದೆ, ರಾಜ್ಯದ 39 ಆದರ್ಶ ವಿದ್ಯಾಲಯಗಳಲ್ಲಿ ದಾಖಲಾತಿ ಬೇಡಿಕೆ ಹೆಚ್ಚಾಗಿರುವುದನ್ನು ಪರಿಗಣಿಸಿ, ರಾಜ್ಯದ 74 ಆದರ್ಶ ವಿದ್ಯಾಲಯಗಳಲ್ಲಿ ಪ್ರಸ್ತುತ ನಿರ್ವಹಿಸುತ್ತಿರುವ ವಿಭಾಗಗಳ ಜೊತೆಗೆ 6ನೇ ತರಗತಿಗೆ 2023-24 ನೇ ಸಾಲಿನಿಂದ ಹೆಚ್ಚುವರಿಯಾಗಿ ಒಂದು ವಿಭಾಗವನ್ನು (ವಿದ್ಯಾರ್ಥಿಗಳ ಸಂಖ್ಯೆ: 40) ಪ್ರಾರಂಭಿಸಲು ಸರ್ಕಾರವು ಅನುಮತಿ ನೀಡಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

Hosamath 14/3/2023

**(ಮಹಾಂತಯ್ಯ ಎಸ್. ಹೊಸಮಠ)**
ಸರ್ಕಾರದ ಅಧೀನ ಕಾರ್ಯದರ್ಶಿ,
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ,
(ಪ್ರಾಥಮಿಕ)

**ಇವರಿಗೆ:**

1. ಮಹಾಲೇಖಪಾಲರು, (ಆಡಿಟ್ 1 & 2) ಕರ್ನಾಟಕ, ಬೆಂಗಳೂರು.
2. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
3. ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ ಕರ್ನಾಟಕ, ಬೆಂಗಳೂರು.
4. ಮುಖ್ಯ ಲೆಕ್ಕಾಧಿಕಾರಿ, ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
5. ಆಯುಕ್ತರು, ಖಜಾನಾ ಇಲಾಖೆ, ವಿಶ್ವೇಶ್ವರಯ್ಯ ಮುಖ್ಯ ಗೋಪುರ, ಬೆಂಗಳೂರು.
6. ಉಪನಿರ್ದೇಶಕರು, ಎನ್.ಎಂ.ಸಿ. ನೋ.45, ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
7. ಸರ್ಕಾರದ ಉಪಕಾರ್ಯದರ್ಶಿ-2, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
8. ಖಜಾನಾಧಿಕಾರಿ, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
9. ಸಾಪ್ತಾಹಿಕ ರಾಜ್ಯ ಪತ್ರ/ಶಾಖಾರಕ್ಷ ಕಡತ/ಹೆಚ್ಚುವರಿ ಪ್ರತಿಗಳು.

**ಪ್ರತಿ ಮಾಹಿತಿಗಾಗಿ:**

1. ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಬಹುಮಹಡಿ ಕಟ್ಟಡ, ಬೆಂಗಳೂರು.
3. ಸರ್ಕಾರದ ಉಪಕಾರ್ಯದರ್ಶಿ ಹಾಗೂ ಆಂತರಿಕ ಆರ್ಥಿಕ ಸಲಹೆಗಾರರ ಆಪ್ತ ಸಹಾಯಕರು, ಶಿಕ್ಷಣ ಇಲಾಖೆ, ಬೆಂಗಳೂರು.